## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : 2019-20ನೇ ಸಾಲಿನಲ್ಲಿ ಹೊಸದಾಗಿ 05 ಅಲ್ಪಸಂಖ್ಯಾತರ ಮೊರಾರ್ಜಿದೇಸಾಯಿ ವಸತಿ ಶಾಲೆಗಳನ್ನು ಹುದ್ದೆಗಳ ಸೃಜನೆಯೊಂದಿಗೆ ಪ್ರಾರಂಭಿಸಲು ಮಂಜೂರಾತಿ ನೀಡುವ ಕುರಿತು.

ಓದಲಾಗಿದೆ:
1. 2019-20ನೇ ಸಾಲಿನ ಆಯವ್ಯಯ ಭಾಷಣದ **ಕಂಡಿಕೆ:177.**
2. ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯ ಇವರು ಸಲ್ಲಿಸಿರುವ ಏಕಕಡತ ಪ್ರಸ್ತಾವನೆ ಸಂಖ್ಯೆ: ಅಸಂನಿ/ವ.ಶಾ/ಸಿಆರ್-13/ 2019-20 ದಿನಾಂಕ: 13-05-2019.

*~*~*~*~*~*

ಪ್ರಸ್ತಾವನೆ:-

ಮೇಲೆ ಓದಲಾದ ಕ್ರಮ ಸಂಖ್ಯೆ (1)ರಲ್ಲಿ ಸನ್ಮಾನ್ಯ ಮುಖ್ಯಮಂತ್ರಿಗಳು 2019-20ನೇ ಸಾಲಿನ ಆಯವ್ಯಯ ಭಾಷಣದ **ಕಂಡಿಕೆ-177ರಲ್ಲಿ "ಮುಸ್ಲಿಂ ಸಮುದಾಯದ ಹೆಣ್ಣು ಮಕ್ಕಳ ಶಿಕ್ಷಣಕ್ಕೆ ಉತ್ತೇಜನ ನೀಡಲು ಹೊಸದಾಗಿ ದಾವಣಗೆರೆ, ತುಮಕೂರು, ಗದಗ, ಧಾರವಾಡ ಮತ್ತು ಕಲಬುರಗಿ ಜಿಲ್ಲೆಗಳಲ್ಲಿ 05 ಮೊರಾರ್ಜಿದೇಸಾಯಿ ಹೆಣ್ಣು ಮಕ್ಕಳ ವಸತಿ ಶಾಲೆಗಳನ್ನು ಪ್ರಾರಂಭಿಸಲು ಉದ್ದೇಶಿಸಲಾಗಿದೆ. ಈ ಉದ್ದೇಶಕ್ಕಾಗಿ 2019-20ನೇ ಸಾಲಿನಲ್ಲಿ ರೂ.20.00ಕೋಟಿಗಳ ಅನುದಾನ ಒದಗಿಸಿದೆ"** ಎಂದು ಘೋಷಿಸಿರುತ್ತಾರೆ.

ಈ ಯೋಜನೆಯು ಮುಂದುವರೆದ ಕಾರ್ಯಕ್ರಮವಾಗಿದ್ದು, ಮೇಲೆ ಘೋಷಿಸಿರುವ ಕಾರ್ಯಕ್ರಮಗಳನ್ನು ರಾಜ್ಯದಲ್ಲಿ ಮತೀಯ ಅಲ್ಪಸಂಖ್ಯಾತರ ಸಮುದಾಯದವರೆಗೆ ವಿವಿಧ ಜಿಲ್ಲೆ ಮತ್ತು ತಾಲ್ಲೂಕುಗಳಲ್ಲಿ ಈಗಾಗಲೇ 95 ಮೊರಾರ್ಜಿದೇಸಾಯಿ ವಸತಿ ಶಾಲೆಗಳನ್ನು ಹಾಗೂ 05 ಮುಸ್ಲಿಂ ವಸತಿ ಶಾಲೆಗಳನ್ನು ಪ್ರಾರಂಭಿಸಲಾಗಿದೆ. 2019-20ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-177ರಲ್ಲಿ ಘೋಷಿಸಿರುವಂತೆ ದಾವಣಗೆರೆ, ತುಮಕೂರು, ಗದಗ, ಕಲಬುರಗಿ ಮತ್ತು ಧಾರವಾಡ ಜಿಲ್ಲೆಯಲ್ಲಿ 05 ಹೆಣ್ಣು ಮಕ್ಕಳ ಮೊರಾರ್ಜಿದೇಸಾಯಿ ವಸತಿ ಶಾಲೆಗಳನ್ನು 250 ಸಂಖ್ಯಾಬಲದೊಂದಿಗೆ ಆಂಗ್ಲ ಮಾಧ್ಯಮದಲ್ಲಿ ಅಗತ್ಯ ಹುದ್ದೆಗಳನ್ನು ಸೃಜಿಸಿ ಪ್ರಾರಂಭಿಸಲು ಮೇಲೆ ಓದಲಾದ ಕ್ರಮ ಸಂಖ್ಯೆ (2)ರಲ್ಲಿ ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ ರವರು ಏಕಕಡತ ಪದ್ಧತಿಯಲ್ಲಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

....2